**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು**

**ಸಿಸಿ ಸಂಖ್ಯೆ**: 19/2022

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ಹುಲ್ಲಹಳ್ಳಿ ಪೊಲೀಸ್ ಠಾಣೆ, ನಂಜನಗೂಡು.

ವಿರುದ್ಧ

**ಆರೋಪಿಗಳು** : ಶ್ರೀ.ಬೋರೇಗೌಡ ಮತ್ತು ಇತರರು

:: ದೋಷಾರೋಪಣೆ ::

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿಗಳಾದ-

2) ಶ್ರೀ.ಬಸವೇಗೌಡ ಬಿನ್ ಬೋರೇಗೌಡ,
ವಯಸ್ಸು ಸುಮಾರು 31 ವರ್ಷ,

3) ಶ್ರೀ.ಸಿದ್ದಲಿಂಗೇಗೌಡ ಬಿನ್ ಲೇಟ್ ಕಾಳೇಗೌಡ
ವಯಸ್ಸು ಸುಮಾರು 65 ವರ್ಷ,

4) ಶ್ರೀ.ಸ್ವಾಮಿ ಬಿನ್ ಸಿದ್ದಲಿಂಗೇಗೌಡ
ವಯಸ್ಸು ಸುಮಾರು 28 ವರ್ಷ,

ನಂಜನಗೂಡು ತಾಲ್ಲೂಕಿನ ಬಿದರಗೂಡು ಗ್ರಾಮದ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ಮೊದಲನೆಯದಾಗಿ ದಿನಾಂಕ 11-04-2020 ರಂದು ಮಧ್ಯಾಹ್ನ 12-00 ಗಂಟೆ ಸಮಯದಲ್ಲಿ ಹುಲ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಕೆಂಬಾಲ್ ಗ್ರಾಮದ ಎಲ್ಲೆಗೆ ಸೇರಿದ ಸರ್ವೆ ನಂಬರ್-353 ರಲ್ಲಿರುವ ಶ್ರೀಮತಿ.ಪುಟ್ಟಮ್ಮರವರ ಜಮೀನಿನ ಪೂರ್ವಕ್ಕೆ ಇರುವ ಓಣಿ ರಸ್ತೆಯಲ್ಲಿ ಚಾಸಾ-1-ಶ್ರೀಮತಿ.ಪುಟ್ಟಮ್ಮ ಮತ್ತು ಚಾಸಾ-2-ಶ್ರೀ.ಪ್ರತಾಪ್ ರವರುಗಳು ಜಮೀನು ಉಳುಮೆ ಮಾಡಿಸುತ್ತಿರುವಾಗ ಆರೋಪಿಗಳಾದ ನೀವು ಚಾಸಾ-1 ರವರ ಜಮೀನಿನ ಬಳಿ ಬಂದು ಈ ಜಮೀನು ತಮಗೆ ಸೇರಿದ್ದು, ಎಂದು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 2 ನೇ ಆರೋಪಿಯಾದ ನೀವು ಚಾಸಾ-1 ರವರ ಸೀರೆ ಹಿಡಿದು ಎಳೆದಾಡಿ ಆಕೆಗೆ ಮಾನಭಂಗ ಮಾಡುವ ಉದ್ದೇಶದಿಂದ ಚಾಸಾ-1 ರವರ ಮೇಲೆ ಅಪರಾಧಿಕ ಬಲ ಪ್ರಯೋಗ ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ 34 ರಡಿಯಲ್ಲಿ

ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 2 ನೇ ಆರೋಪಿಯಾದ ನೀವು ಚಾಸಾ–1 ರವರ ಮಾನಕ್ಕೆ ಕುಂದುಂಟು ಮಾಡುವ ಉದ್ದೇಶದಿಂದ ಚಾಸಾ–1 ರವರನ್ನು ಉದ್ದೇಶಿಸಿ "ಲೋಫರ್ ಮುಂಡೆ" ಎಂದು ಬೈದಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 509 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 2 ನೇ ಆರೋಪಿಯಾದ ನೀವು ಸ್ಥಳದಲ್ಲಿ ಬಿದ್ದಿದ್ದ ಮಾರಕಾಯುಧವಾದ ಕಲ್ಲನ್ನು ತೆಗೆದುಕೊಂಡು ಚಾಸಾ–1 ರವರ ಬೆನ್ನಿಗೆ ಸ್ವ–ಇಚ್ಛೆಯಿಂದ ಹಲ್ಲೆ ಮಾಡಿದ್ದಲ್ಲದೆ, 3 ನೇ ಆರೋಪಿಯಾದ ನೀವು ಕಲ್ಲಿನಿಂದ ಚಾಸಾ–2 ರವರ ಹಣೆಯ ಎಡಭಾಗ ಮತ್ತು ಮೂಗಿನ ಎಡಭಾಗಕ್ಕೆ ಸ್ವ–ಇಚ್ಛೆಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ನಾಲ್ಕನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 4 ನೇ ಆರೋಪಿಯಾದ ನೀವು ಜಗಳ ಬಿಡಿಸಲು ಬಂದ ಚಾಸಾ–2 ರವರನ್ನು ತಬ್ಬಿ ಹಿಡಿದುಕೊಂಡು ಒಂದು ಎಲ್ಲೆಯಿಂದಾಚೆಗೆ ಮುಂದೆ ಹೋಗದಂತೆ ಅಕ್ರಮವಾಗಿ ಪ್ರತಿಬಂಧಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ರವರ ಜೊತೆ ಜಗಳ ತೆಗೆದು ಆರೋಪಿಗಳೆಲ್ಲರೂ ಚಾಸಾ–1 ರವರನ್ನು ಉದ್ದೇಶಿಸಿ "ಇವತ್ತು ಬದುಕಿದ್ದೀಯಾ ನಿನ್ನನ್ನು ಬಿಡುವುದಿಲ್ಲ" ಎಂದು ಜೀವಬೆದರಿಕೆ ಹಾಕಿದ್ದು, ಆ ಮೂಲಕ ಚಾಸಾ–1 ರವರು ಹೆದರುವಂತೆ ಮಾಡಿ ಅವರು ಕಾನೂನು ಸಮ್ಮತವಾಗಿ ಮಾಡಬೇಕಾಗಿರುವ ಕೃತ್ಯವನ್ನು ಮಾಡದಂತೆ ಅಥವಾ ಕಾನೂನು ಸಮ್ಮತವಾಗಿ ಮಾಡಬಾರದ ಕೃತ್ಯವನ್ನು ಮಾಡುವಂತೆ

ಅಪಾಯದ ಭೀತಿಯನ್ನು ಹುಟ್ಟಿಸಿ ಅಪರಾಧಿಕ ಭಯೋತ್ಪಾದನೆಯನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1– ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

2 ರಿಂದ 4 ನೇ ಆರೋಪಿಗಳ ಉತ್ತರಃ

ಪ್ರಶ್ನೆ:2– ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

2 ರಿಂದ 4 ನೇ ಆರೋಪಿಗಳ ಉತ್ತರಃ

(2 ರಿಂದ 4 ಆರೋಪಿಗಳಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ 2 ರಿಂದ 4 ಆರೋಪಿಗಳು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 30.09.2025.

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.